07	ಮಂಗೂರ್	ಈ ಗ್ರಾಮದ ಯಾವುದೇ ಸಂಸ್ಥೆಯಿಂದ ಶಾದಿಮಹಲ್ ಪ್ರಸ್ತಾವನೆ ಬಂದಿರುವುದಿಲ್ಲ.
08	ಭೋಜ್	ಪೀರ್ ದಾವಲ್ ಮಲ್ಲಿಕಾ ದರ್ಗಾ ಈ ಸಂಸ್ಥೆಗೆ ರೂ.5.00 ಲಕ್ಷಗಳನ್ನು ಶಾದಿಮಹಲ್ ನಿರ್ಮಾಣಕ್ಕಾಗಿ ಬಿಡುಗಡೆ ಮಾಡಲಾಗಿದೆ. ಕೆಲಸ ಪ್ರಾರಂಭಿಸಬೇಕಾಗಿದೆ.
09	ಚಾಂದ್ ಶಿರವಾಡ್	ಶ್ರೀ ಪಾರ್ಶ್ವನಾಥ ದಿಗಂಬರ ಜೈನ್ ಮಂದಿರ ಈ ಸಂಸ್ಥೆ ವತಿಯಿಂದ ಶಾದಿ ಮಹಲ್ ನಿರ್ಮಾಣಕ್ಕೆ ರೂ.5.00 ಲಕ್ಷ ಬಿಡುಗಡೆ ಮಾಡಲಾಗಿದೆ. ಕಟ್ಟಡದ ಕಾಮಗಾರಿ ಪೂರ್ಣ ಗೊಂಡಿದೆ.

ಈ) ಅನುದಾನದ ಲಭ್ಯತೆ ಹಾಗೂ ಸರಿಯಾದ ದಾಖಲಾತಿಗಳನ್ವಯ ಹಣ ಬಿಡುಗಡೆ ಮಾಡಲಾಗಿದೆ.

ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸುವುದು

872 (600) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳ ತಾಲ್ಲೂಕಿನ ಕಾತರಗಿ ಗುಡ್ಲಾನೂರು ಮತ್ತು ಹುಲಗಿ ಗ್ರಾಮಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸಲು ಪ್ರಸ್ತಾವನೆಯು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಪ್ರಸಕ್ತ ಸಾಲಿನಲ್ಲಿಯೇ ಪ್ರಾರಂಭಿಸಲಾಗುವುದೇ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ.

ಆ) ಕೊಪ್ಪಳ ತಾಲ್ಲೂಕಿನ ಗ್ರಾಮೀಣ ಜನಸಂಖ್ಯೆಯು 2001 ರ ಜನಗಣತಿ ಪ್ರಕಾರ 2,49,640 ಇದ್ದು, ಮಾರ್ಗಸೂಚಿಗಳ ಪ್ರಕಾರ 8

ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮಂಜೂರು ಮಾಡಬೇಕಾಗಿದ್ದು ಈಗಾಗಲೇ 12 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ. ಆದುದರಿಂದ ಸದರಿ ತಾಲ್ಲೂಕಿಗೆ ಹೆಚ್ಚಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಲು ಅವಕಾಶ ಇರುವುದಿಲ್ಲ.

ಅಲ್ಪಸಂಖ್ಯಾತರ ನಿರುದ್ಯೋಗಿ ಯುವಕರಿಗೆ ಕಾರ್ಯಕ್ರಮಗಳು

873 (1475) ಶ್ರೀ ಖಾದರ್ ಯು.ಟಿ. (ಮಂಗಳೂರು) : ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಅಲ್ಪಸಂಖ್ಯಾತರ ನಿರುದ್ಯೋಗಿ ಯುವ ಜನತೆಗೆ ಸರ್ಕಾರ ಯಾವ ಯಾವ ಕಾರ್ಯಕ್ರಮದಡಿಯಲ್ಲಿ ಉದ್ಯೋಗಾವಕಾಶ ಕಲ್ಪಿಸಿ ಕೊಡಲಾಗುವುದೇ (ವಿವರ ನೀಡುವುದು);

ಆ) ಈ ಕಾರ್ಯಕ್ರಮಗಳಿಗೆ ಪ್ರಸ್ತುತ ವರ್ಷ ಎಷ್ಟು ಹಣವನ್ನು ಮೀಸಲಿರಿಸಲಾಗಿದೆ;

ಇ) ದಕ್ಷಿಣ ಕನ್ನಡ ಜಿಲ್ಲೆಗೆ ಈ ಸಾಲಿನಲ್ಲಿ ಮೀಸಲಿಟ್ಟ ಹಣ ಎಷ್ಟು?

ಶ್ರೀ ಪ್ರೊ. ಡಾ. ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ರಾಜ್ಯದ ಅಲ್ಪಸಂಖ್ಯಾತರ ನಿರುದ್ಯೋಗಿ ಯುವಕರುಗಳಿಗೆ ಸ್ವಯಂ ಉದ್ಯೋಗಿ ಯಾಗಲು ಸ್ವಾವಲಂಬನ ಸಾಲದ ಯೋಜನೆಯಡಿಯಲ್ಲಿ ಹಾಗೂ ಶ್ರಮಶಕ್ತಿ ಸಾಲದ ಯೋಜನೆಯಡಿಯಲ್ಲಿ ಸಾಲ ಸೌಲಭ್ಯವನ್ನು ಕಲ್ಪಿಸಲಾಗುತ್ತದೆ.

ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಅಲ್ಪಸಂಖ್ಯಾತರ ನಿರುದ್ಯೋಗ ಯುವ ಜನತೆಗೆ ವಿವಿಧ ಯೋಜನೆಯಡಿ ತರಬೇತಿಗಳನ್ನು ನೀಡಿ ಉದ್ಯೋಗವಕಾಶ ಕಲ್ಪಿಸಿಕೊಡಲಾಗುತ್ತಿದೆ. ಇವುಗಳ ವಿವರಗಳನ್ನು ಅನುಬಂಧ–1 ರಲ್ಲಿ ಲಗತ್ತಿಸಿದೆ.

ಆ) ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಪ್ರಸಕ್ತ ಸಾಲಿನಲ್ಲಿ ಸ್ವಾವಲಂಬನ ಸಾಲದ ಯೋಜನೆಗೆ ರೂ.400.00 ಲಕ್ಷಗಳನ್ನು ಹಾಗೂ ಶ್ರಮಶಕ್ತಿ ಯೋಜನೆಗೆ ರೂ.720.00 ಲಕ್ಷಗಳನ್ನು ಮೀಸಲಿರಿ ಸಲಾಗಿದೆ.